ಕರ್ನಾಟಕ ಸರ್ಕಾರದ

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560 001**

ಸಂಖ್ಯೆ: 1159941 DPI-CPI0C7-3(OT)/5/2023 ದಿನಾಂಕ:01-01-2024

::ಸುತ್ತೋಲೆ::

ವಿಷಯ: ಶಾಲಾ ವಾಹನಗಳಲ್ಲಿ ಕಾರ್ಯನಿರ್ವಹಿಸುವ ಚಾಲಕರ ಪೊಲೀಸ್ ವೆರಿಫಿಕೇಷನ್ ಮಾಡಿಸುವ ಬಗ್ಗೆ.

ಉಲ್ಲೇಖ:1. ಸರ್ಕಾರದ ಪತ್ರದ ಸಂಖ್ಯೆ: ಇಪಿ 176 ಪಿಜಿಸಿ 2019 ದಿನಾಂಕ: 04/08/2023

2. ಈ ಕಛೇರಿ ಸುತ್ತೋಲೆ ಸಂಖ್ಯೆ: ಸಿ7(2)ಪ್ರಾಶಿಅ/ಕ.ಸ್ಕೂ.ಕ್ಯಾ.ನಿ/56/2019-20 ದಿನಾಂಕ:26-07-2019

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ-1ರನ್ವಯ ಶಾಲಾ ವಾಹನಗಳಲ್ಲಿ ಕಾರ್ಯನಿರ್ವಹಿಸುವ ಚಾಲಕರ ಪೊಲೀಸ್ ವೆರಿಫಿಕೇಷನ್ ಮಾಡಿಸುವ ಬಗ್ಗೆ ಕ್ರಮವಹಿಸಲು ತಿಳಿಸಲಾಗಿರುತ್ತದೆ.

ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ಕ್ಕೆ ತಿದ್ದುಪಡಿ ತಂದು Conditions for vehicles engaged in transport of school children Rules 2012, ಖಾಸಗಿ ಒಪ್ಪಂದ ವಾಹನಗಳಲ್ಲಿ ಶಾಲಾ ಮಕ್ಕಳಿಗೆ ಸಾರಿಗೆ ಸೌಲಭ್ಯ ಒದಗಿಸುವ ಸಲುವಾಗಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಅಧಿಸೂಚನೆಯ ಕ್ರಮ ಸಂಖ್ಯೆ(4) ರಲ್ಲಿ ಈ ಕೆಳಕಂಡಂತೆ ವ್ಯಾಖ್ಯಾನಿಸಲಾಗಿದೆ.

**4. School cabs Safety Committee:- In every school wherein school cab used as a means of transportation shall have a safety committee to look into the matters pertaining to safe transportation of School children, and transportation fee and identification of stops. The safety Committee should comprise parents and transporters representatives along with the school staff. The committee shall verify the validity of documents of the vehicle viz., Registration certificate, Certificate of fitness, Certificate of Insurance Permit, Emission Certificate, Driving License, Fire extinguisher, First aid kit, and ensure that all the safety measures have been adopted in the vehicle.**

ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989 ನಿಯಮದಂತೆ ''ಸ್ಕೂಲ್ ಕ್ಯಾಬ್ ಸೇಫ್ಟಿ ಕಮಿಟಿ'' ರಚಿಸಲು ಉಲ್ಲೇಖ-2ರನ್ವಯ ಈ ಕಛೇರಿಯಿಂದ ಸುತ್ತೋಲೆಯನ್ನು ಹೊರಡಿಸಿರುವುದನ್ನು ಉಲ್ಲೇಖಿಸಿ ಶಾಲಾ ವಾಹನಗಳಲ್ಲಿ ಕಾರ್ಯನಿರ್ವಹಿಸುವ ಚಾಲಕರ ಮತ್ತು ವಾಹನಗಳ ಸಹಾಯಕರ ಪೊಲೀಸ್ ವೆರಿಫಿಕೇಷನ್ ಮಾಡಿಸುವ ಬಗ್ಗೆ ಎಲ್ಲಾ ಶಾಲಾ ಆಡಳಿತ ಮಂಡಳಿಗಳು ಕೆಳಕಂಡಂತೆ ಕ್ರಮವಹಿಸಲು ತಿಳಿಸಿದೆ.

1. ಶಾಲಾ ವಾಹನಗಳಲ್ಲಿ ಮಕ್ಕಳನ್ನು ಮನೆಯಿಂದ ಶಾಲೆಗೆ ಹಾಗೂ ಶಾಲೆಯಿಂದ ಮನೆಗೆ ಕರೆತರುವ ಸಂದರ್ಭದಲ್ಲಿ ಖಾಸಗಿ ಶಾಲಾ ವಾಹನಗಳಲ್ಲಿ ಚಾಲಕರಿಂದ ಮತ್ತು ವಾಹನಗಳ ಸಹಾಯಕರಿಂದ ಮಕ್ಕಳ ಮೇಲೆ ದೌರ್ಜನ್ಯ ಎಸಗುತ್ತಿರುವಂತೆ ಪ್ರಕರಣಗಳು ವರದಿಯಾಗುತ್ತಿರುವುದು ಕಂಡುಬರುತ್ತಿದ್ದು, ಈ ಹಿನ್ನಲೆಯಲ್ಲಿ ಮಕ್ಕಳ ಸುರಕ್ಷತಾ ದೃಷ್ಠಿಯಿಂದ ಬಸ್, ವ್ಯಾನ್, ಆಟೋ ರಿಕ್ಷಾ ಮತ್ತು ಇತರೆ ಶಾಲಾ ವಾಹನಗಳಲ್ಲಿ ಕಾರ್ಯನಿರ್ವಹಿಸುತ್ತಿರುವಂತಹ ಎಲ್ಲಾ ಚಾಲಕರ ಮತ್ತು ಸಹಾಯಕರ ಮಾನಸಿಕ ಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸಂಬಂಧಿಸಿದ ಪೊಲೀಸ್ ಠಾಣೆಗಳಿಂದ ಅವರ ನಡತೆಯ ಬಗ್ಗೆ ನಡವಳಿಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವುದು.
2. ಖಾಸಗಿ ಶಾಲಾ ವಾಹನಗಳಲ್ಲಿ, ಬಸ್, ವ್ಯಾನ್, ಆಟೋ ರಿಕ್ಷಾಗಳಲ್ಲಿ ಶಾಲಾ ಮಕ್ಕಳನ್ನು ಮನೆಯಿಂದ ಶಾಲೆಗೆ ಹಾಗೂ ಶಾಲೆಯಿಂದ ಮನೆಗೆ ಕರೆತರುವ ಕೆಲಸವನ್ನು ನಿರ್ವಹಿಸುವ ಚಾಲಕರು ಮತ್ತು ಸಹಾಯಕರ ನಡವಳಿಕೆ ಬಗ್ಗೆ ಸಂಬಂಧಿಸಿದ ಪೊಲೀಸ್ ಠಾಣೆಗಳಿಂದ ನಡತೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವುದು ಹಾಗೂ ಪ್ರತಿ ಎರಡು

ವರ್ಷಗಳಿಗೊಮ್ಮೆ ನವೀಕರಿಸುವುದು.

3. ಸದರಿ ಚಾಲಕರ ಮತ್ತು ಸಹಾಯಕರಿಗೆ ಸಂಬಂಧಿಸಿದಂತೆ ಪೊಲೀಸ್ ಠಾಣೆಗಳಿಂದ ಪಡೆದ ನಡವಳಿಕೆ ಪ್ರಮಾಣ ಪತ್ರವನ್ನು ಆಯಾ ಶಾಲೆಯ **SATS** ನಲ್ಲಿ ತಂತ್ರಾಂಶದಲ್ಲಿ Upload ಮಾಡುವುದು.
4. ಖಾಸಗಿ ಶಾಲಾ ವಾಹನಗಳಲ್ಲಿ, ಬಸ್, ವ್ಯಾನ್, ಶಾಲಾ ಮಕ್ಕಳನ್ನು ಮನೆಯಿಂದ ಶಾಲೆಗೆ ಹಾಗೂ ಶಾಲೆಯಿಂದ ಮನೆಗೆ ಕರೆತರುವ ಕೆಲಸವನ್ನು ನಿರ್ವಹಿಸಲು ಸಹಾಯಕರಾಗಿ ಮಹಿಳಾ ಸಹಾಯಕರನ್ನು ನೇಮಿಸಿಕೊಳ್ಳಬೇಕು.
5. ಪ್ರತಿ ಖಾಸಗಿ ಶಾಲಾ ವಾಹನಗಳಲ್ಲಿ ಕಡ್ಡಾಯವಾಗಿ ಸಿ.ಸಿ.ಕ್ಯಾಮರ ಅಳವಡಿಸುವುದು.
6. ಶಾಲಾ ವಾಹನಗಳಲ್ಲಿ ನಿಗದಿತ ಸಂಖ್ಯೆಗಿಂತ ಹೆಚ್ಚು ಮಕ್ಕಳನ್ನು ಕರೆದುಕೊಂಡು ಹೋಗದಂತೆ ನಿರ್ಬಂಧಿಸುವುದು.
7. ಶಾಲಾ ವಾಹನಗಳಲ್ಲಿ ಕೆಲಸ ನಿರ್ವಹಿಸುವ ಚಾಲಕರು ಮತ್ತು ಸಹಾಯಕರು ಪ್ರತಿದಿನ ಕೆಲಸ ಪ್ರಾರಂಭದ ಮೊದಲು ಮತ್ತು ಎಲ್ಲಾ ಮಕ್ಕಳನ್ನು ಮನೆಗೆ ಬಿಟ್ಟನಂತರ ಶಾಲೆಗೆ ಬಂದು ಹಾಜರಾತಿ ಪುಸ್ತಕದಲ್ಲಿ ಶಾಲಾ ಮುಖ್ಯಸ್ಥರ ಸಮ್ಮುಖದಲ್ಲಿ ಕಡ್ಡಾಯವಾಗಿ ಸಹಿ ಮಾಡುವುದು
8. ಸದರಿ ಮಾಹಿತಿಗಳನ್ನು ಪ್ರತಿ ವರ್ಷ ಆಯಾ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸಿ ಅನುಮೋದನೆಯನು ಪಡೆಯುವುದು.

ಈ ಮೇಲ್ಕಂಡ ಅಂಶಗಳನ್ನು ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳು ಕಟ್ಟುನಿಟ್ಟಾಗಿ ಅನುಸರಿಸುತ್ತಿರುವುದನ್ನು ಕ್ಷೇತ್ರಶಿಕ್ಷಣಾಧಿಕಾರಿಗಳು ಪರಿಶೀಲಿಸಿ ಖಾತ್ರಿಪಡಿಸಿಕೊಳ್ಳುವುದು. ಶಾಲಾ ಮಕ್ಕಳ ಮೇಲೆ ದೌರ್ಜನ್ಯಗಳಾಗದಂತೆ ತಡೆಗಟ್ಟಲು ಮೇಲ್ಕಂಡ ಅಂಶಗಳನ್ನು ಅನುಸರಿಸಲು ಶಾಲಾ ಆಡಳಿತ ಮಂಡಳಿ ಮತ್ತು ಮುಖ್ಯಸ್ಥರಿಗೆ ಸೂಚನೆ ನೀಡಲು ತಿಳಿಸಿದೆ. ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಯಾವುದೇ ನಿಯಮಗಳನ್ನು ಉಲ್ಲಂಘಿಸಿದಲ್ಲಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಸೂಕ್ತ ಕ್ರಮ ವಹಿಸುವುವಂತೆ ಸೂಚಿಸಿದೆ.

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ:- ರಾಜ್ಯ ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ,
[ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ]

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಸಾರಿಗೆ ಆಯುಕ್ತರ ಕಛೇರಿ, ಟಿ.ಟಿ.ಎಂ.ಸಿ ಕಟ್ಟಡ, ಕೆ.ಹೆಚ್.ರಸ್ತೆ, ಶಾಂತಿನಗರ, ಬೆಂಗಳೂರು ಇವರಿಗೆ ಗೌರವಗಳೊಂದಿಗೆ ಮಾಹಿತಿಗಾಗಿ.
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ ವಿಭಾಗ ಮತ್ತು ಕಲಬುರಗಿ ವಿಭಾಗ.
4. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು(ಆಡಳಿತ) , ಶಾಲಾ ಶಿಕ್ಷಣ ಇಲಾಖೆ, ಇವರಿಗೆ ಕಳುಹಿಸುತ್ತಾ ಸದರಿ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ನಿರ್ದೇಶನ ನೀಡಲು ಅಗತ್ಯ ಕ್ರಮವಹಿಸಲು ಸೂಚಿಸಿದೆ.
5. ರಾಜ್ಯದ ಎಲ್ಲಾ ತಾಲ್ಲೂಕು/ವಲಯಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಳುಹಿಸುತ್ತಾ, ನಿಮ್ಮ ಆಡಳಿತ ವ್ಯಾಪ್ತಿಯ ಎಲ್ಲಾ ಶಾಲಾ ಮುಖ್ಯಸ್ಥರುಗಳಿಗೆ ಸದರಿ ಸುತ್ತೋಲೆಯನ್ನು ಕಳುಹಿಸಿ ಸುತ್ತೋಲೆಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಕ್ತ ಕ್ರಮವಹಿಸಲು ಸೂಚಿಸಿದೆ.
6. ಆಯುಕ್ತರ ಕಛೇರಿ. ಇ-ಆಡಳಿತ ವಿಭಾಗ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದಕ್ಕಾಗಿ.
7. ಕಛೇರಿ ಪ್ರತಿ.